3)1999-2000 ನೇ ವರ್ಷಗಳಲ್ಲಿ ಯಾವ ಯಾವ ಟ್ರಸ್ಟ್‌ಗಳಿಗೆ ಅನುದಾನ ನೀಡಬೇಕೆಂದು ಈಗಾಗಲೇ ನಿರ್ಧರಿಸಿಲ್ಲ. ಈ ಆರ್ಥಿಕ ವರ್ಷದಲ್ಲಿ ಸರ್ಕಾರಕ್ಕೆ ಬರುವ ಪ್ರಸ್ತಾವ ಮನವಿಗಳನ್ನು ಪರಿಶೀಲಿಸಿ ಅಗತ್ಯತೆ ಮತ್ತು ಆದ್ಯತೆಯನ್ನು ಗಮನದಲ್ಲಿಟ್ಟುಕೊಂಡು ಅನುದಾನವನ್ನು ಮಂಜೂರು ಮಾಡಲಾಗುವುದು.

ವಾಟರ್ ಶೆಡ್ಡ್ ಡೆವಲಪ್‌ಮೆಂಟ್ ಬೋರ್ಡ್.

1564(2137) ಶ್ರೀ ಯು.ಆರ್. ಸಭಾಪತಿ (ಉಡುಪಿ) :— ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಅನುದಾನ ಉಪಯೋಗಿಸಲು ವಾಟರ್ ಶೆಡ್ ಡೆವಲಪ್‌ಮೆಂಟ್ ಬೋರ್ಡ್‌ನ್ನು ಕೃಷಿ ಇಲಾಖೆಯ ಅಡಿಯಲ್ಲಿ ರಚಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ, ಸದರಿ ಮಂಡಳಿಯ ರಚನೆಯಾಗದೆ ಕೇಂದ್ರ ಸರ್ಕಾರದ ಅನುದಾನವು ವಾಪಸ್ ಆಗಿರುವುದು ನಿಜವೇ? ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು?

ಶ್ರೀ ಸಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು) :—

ಅ) ಕೇಂದ್ರ ಸರ್ಕಾರದ ಅನುದಾನಿತ ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳೂ ಸೇರಿದಂತೆ ಎಲ್ಲಾ ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳನ್ನೂ ಒಂದೇ ಕಡೆಯಲ್ಲಿ ಸೇರಿಸಿ ಅನುಷ್ಠಾನಗೊಳಿಸುವ ಸಲುವಾಗಿ ರಾಜ್ಯದಲ್ಲಿ ಪ್ರತ್ಯೇಕ ಜಲಾನಯನ ಅಭಿವೃದ್ಧಿ ನಿರ್ದೇಶನಾಲಯವನ್ನು ರಚಿಸುವ ಪ್ರಸ್ತಾವನೆಯೊಂದನ್ನು ಸರ್ಕಾರವು ಪರಿಶೀಲಿಸುತ್ತಿದೆ.

ಆ) ಇಲ್ಲ, ಉದ್ಭವಿಸುವುದಿಲ್ಲ.

ಆರ್.ಟಿ.ಓ. ಕಛೇರಿಗಳಲ್ಲಿ ನಡೆಯುತ್ತಿರುವ ಅವ್ಯವಹಾರ.

1565(1738) ಶ್ರೀ ಯು.ಆರ್. ಸಭಾಪತಿ (ಉಡುಪಿ) :— ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಕಳೆದ ವರ್ಷಗಳಲ್ಲಿ ಆರ್.ಟಿ.ಓ ಕಛೇರಿಗಳಲ್ಲಿ ನಡೆದ ಅವ್ಯವಹಾರ ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ಒದಗಿಸುವುದು)

ಆ) ಇದರಿಂದ ರಾಜ್ಯ ಬೊಕ್ಕಸಕ್ಕೆ ಆದ ನಷ್ಟ ಎಷ್ಟು?

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು?

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :—

ಅ) ರಾಜ್ಯದಲ್ಲಿ ಕಳೆದ ವರ್ಷಗಳಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಅವ್ಯವಹಾರ ನಡೆದಿರುವ ನಾಲ್ಕು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ.

ಪ್ರಾದೇಶಿಕ ಸಾರಿಗೆ ಕಛೇರಿ ಬೆಂಗಳೂರು ಬೆಂಗಳೂರು (ಕೇಂದ್ರ)	-	1 ಪ್ರಕರಣ
ಪ್ರಾದೇಶಿಕ ಸಾರಿಗೆ ಕಛೇರಿ ಬೆಂಗಳೂರು ತುಮಕೂರು	-	1 ಪ್ರಕರಣ
ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿ ಚಿಕ್ಕಬಳ್ಳಾಪುರ	-	1 ಪ್ರಕರಣ
ಪ್ರಾದೇಶಿಕ ಸಾರಿಗೆ ಕಛೇರಿ ಮಂಗಳೂರು (ದಕ್ಷಿಣ ಜಿಲ್ಲೆ)	-	1 ಪ್ರಕರಣ

ಆ) ಮಧ್ಯಂತರ ಆಡಿಟ್ ವರದಿ ಪ್ರಕಾರ ಇದುವರೆಗೆ ರಾಜ್ಯ ಬೊಕ್ಕಸಕ್ಕೆ ಆದ ಒಟ್ಟು ಅಂದಾಜು ನಷ್ಟ ಸುಮಾರು 1,21,97,370-00 ರೂಪಾಯಿಗಳು ಎಂದು ಅಂದಾಜು ಮಾಡಲಾಗಿದೆ (ಅಂತಿಮ ಮೊತ್ತ ಆಡಿಟ್ ಪೂರ್ಣಗೊಂಡ ಮೇಲೆ ಖಚಿತವಾಗಿ ಹೇಳಬಹುದು)

ಇ) 1. ಅವ್ಯವಹಾರಕ್ಕೆ ಸಂಬಂಧಿಸಿದ ನೌಕರರನ್ನು ಹಾಗೂ ಅಧಿಕಾರಿಗಳನ್ನು ಇಲಾಖಾ ವಿಚಾರಣೆ ಬಾಕಿ ಇಟ್ಟು ಅಮಾನತ್ತುಗೊಳಿಸಲಾಗಿದೆ.

ಮಂಗಳೂರು ಪ್ರಕರಣಕ್ಕೆ ಸಂಬಂಧಿಸಿದ ನಾಲ್ಕು ಆಪಾದಿತರು, ತುಮಕೂರು ಮತ್ತು ಚಿಕ್ಕಬಳ್ಳಾಪುರದ ಪ್ರಕರಣಗಳಿಗೆ ಸಂಬಂಧಿಸಿದಂತೆ ತಲಾ ಒಬ್ಬರು ಆಪಾದಿತರುಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗಿದೆ.

ಬೆಂಗಳೂರು (ಕೇಂದ್ರ) ಪ್ರಾದೇಶಿಕ ಸಾರಿಗೆ ಅಧಿಕಾರಿ ಕಛೇರಿ ಪ್ರಕರಣಕ್ಕೆ ಸಂಬಂಧಿಸಿದ ಆಪಾದಿತರ ವಿರುದ್ಧ ಲೋಕಾಯುಕ್ತ ವಿಚಾರಣೆ ಜರುಗಿಸಲಾಗುತ್ತಿದೆ.

2. ವಿಶೇಷ ಆಡಿಟ್ ನಡೆಸಲು ಕ್ರಮ ತೆಗೆದುಕೊಳ್ಳಲಾಗಿದೆ.

ಭಾಲ್ಕಿಯಲ್ಲಿ ಹಮಾಲರ ವಸತಿ ಯೋಜನೆ.

1566(2140) ಡಾ : ವಿಜಯಕುಮಾರ ಭೀಮಣ್ಣಾ ಖಂಡ್ರೆ (ಭಾಲ್ಕಿ) :— ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ಹಮಾಲರ ವಸತಿ ಯೋಜನೆಯಡಿಯಲ್ಲಿ ಭಾಲ್ಕಿ ಎಪಿಎಂಸಿ ಹಮಾಲರಿಗೆ ವಸತಿ ಗೃಹಗಳನ್ನು ಮಂಜೂರು ಮಾಡಲಾಗಿದೆಯೇ;

2. ಹಾಗಿದ್ದಲ್ಲಿ, ಈವರೆವಿಗೆ ಕಾಮಗಾರಿಯನ್ನು ಪ್ರಾರಂಭಿಸದೇ ಇರುವುದಕ್ಕೆ ಕಾರಣಗಳೇನು?